ಆ) ಬಲ್ಕ್ ವೆಂಡಿಂಗ್ ಬೂತ್‌ಗಳ ಮುಖಾಂತರ ಹಾಲು ಸರಬರಾಜು ಮಾಡಲು ಹಾಲನ್ನು ವಿಶೇಷ ರೀತಿಯಲ್ಲಿ ಸಂಸ್ಕರಿಸಬೇಕಾಗಿರುವುದರಿಂದ ಹಾಗೂ ಇದಕ್ಕೆ ವಿಶೇಷ ರೀತಿಯ ಯಂತ್ರಗಳು ಬೇಕಾಗಿರುವುದರಿಂದ ಬಲ್ಕ್ ವೆಂಡಿಂಗ್ ಬೂತ್‌ಗಳನ್ನು ಇತರೆ ಜಿಲ್ಲಾ ಕೇಂದ್ರಗಳಲ್ಲಿ ಪ್ರಾರಂಭಿಸಲು ಸಾಧ್ಯವಾಗಿರುವುದಿಲ್ಲ. ಮಾತೃಡೈರಿ, ಬೆಂಗಳೂರು ಮಾತ್ರ ಈ ಸೌಲಭ್ಯ ಹೊಂದಿರುವುದರಿಂದ ಬೆಂಗಳೂರಿನಲ್ಲಿ ಮಾತ್ರ ಬಲ್ಕ್ ವೆಂಡಿಂಗ್ ಬೂತ್‌ಗಳನ್ನು ತೆರೆಯಲು ಸಾಧ್ಯವಾಗಿದೆ ಹಾಗೂ ರಾಷ್ಟ್ರೀಯ ಹೈನು ಅಭಿವೃದ್ಧಿ ಮಂಡಳಿಯ ಯೋಜನೆಯ ಅನುಸಾರವಾಗಿ ದೇಶದ ಮೆಟ್ರೋ ಕೇಂದ್ರಗಳಲ್ಲಿ ಮಾತ್ರ ಬಲ್ಕ್ ವೆಂಡಿಂಗ್ ಬೂತ್‌ಗಳನ್ನು ಪ್ರಾರಂಭಿಸಲಾಗಿದೆ.

ಉದಾ: ದೆಹಲಿ, ಕಲ್ಕತ್ತಾ, ಮದ್ರಾಸ್, ಬೆಂಗಳೂರು ಮತ್ತು ಹೈದರಾಬಾದ್ ಪಟ್ಟಣಗಳು.

ಜಿಲ್ಲಾ ಕೇಂದ್ರಗಳ ಗ್ರಾಹಕರ ಪೂರ್ಣ ಬೇಡಿಕೆಯನ್ನು ಸ್ಯಾಚೆಟ್‌ಗಳ ಮುಖಾಂತರ ಪೂರೈಸಲಾಗುತ್ತಿದೆ.

ಆ) ಸ್ಯಾಚೆಟ್ ಮುಖಾಂತರ ಉತ್ತಮ ಗುಣಮಟ್ಟದ ಹಾಲನ್ನು ಗ್ರಾಹಕರಿಗೆ ಸರಬರಾಜು ಮಾಡಲಾಗುತ್ತಿರುವುದರಿಂದ ಬಲ್ಕ್ ವೆಂಡಿಂಗ್ ಬೂತುಗಳನ್ನು ಪ್ರಾರಂಭಿಸುವುದು ಈ ಸಧ್ಯಕ್ಕೆ ಅವಶ್ಯಕತೆ ಇರುವುದಿಲ್ಲ.

ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ

303 (1083) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ):-

ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕರ್ನಾಟಕ ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು ?

ಆ) ಅವುಗಳಲ್ಲಿ ಎಷ್ಟು ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆ ಇರುವುದು.

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು):–

ಅ) 1262.

ಇದಲ್ಲದೆ 623 ಪ್ರಾಥಮಿಕ ಆರೋಗ್ಯ ಘಟಕಗಳಿರುತ್ತವೆ.

ಆ) ಒಟ್ಟು ಖಾಲಿ ಇರುವ 493 ಖಾಲಿ ಹುದ್ದೆಗಳ ಪೈಕಿ ಗ್ರಾಮಾಂತರ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಪ್ರಾಥಮಿಕ ಆರೋಗ್ಯ ಘಟಕಗಳಲ್ಲಿ 375 ಹುದ್ದೆಗಳು ಖಾಲಿ ಇರುತ್ತವೆ.

ಧಾರವಾಡ ಜಿಲ್ಲೆಯಲ್ಲಿ ಅನುದಾನ ಪಡೆಯುತ್ತಿರುವ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿಯಿರುವ ಹುದ್ದೆಗಳು

305 (325) ಶ್ರೀ ಪಿ.ಸಿ. ಸಿದ್ದನಗೌಡರ್ (ಕಲಘಟಗಿ):-

ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಧಾರವಾಡ ಜಿಲ್ಲೆಯಲ್ಲಿ ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಸರ್ಕಾರದಿಂದ ಮಂಜೂರಾಗಿದ್ದು ಖಾಲಿಯಿರತಕ್ಕ ಹುದ್ದೆಗಳ ಸಂಖ್ಯೆ ಎಷ್ಟು;